ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 117 ವೆಚ್ಚ 6/2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:16.7.2020

ಇಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,

ಆರ್ಥಿಕ ಇಲಾಖೆ

ರವರಿಗೆ:

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ/ಮುಖ್ಯ ಲೆಕ್ಕಾಧಿಕಾರಿಗಳು

ಮಾನ್ಯರೆ,

ವಿಷಯ: ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಇತರೆ ಇಲಾಖೆಗಳಲ್ಲಿ ಬಾಕಿ ಇರುವ ವೇತನವನ್ನು ಪಾವತಿಸಲು ಹೆಚ್ಚುವರಿ ಅನುದಾನವನ್ನು ಕೋರುವ ಬಗ್ಗೆ

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಇತರೆ ಇಲಾಖೆಗಳಲ್ಲಿ ವೇತನ ವೆಚ್ಚಕ್ಕಾಗಿ ಹೆಚ್ಚುವರಿ ಅನುದಾನವನ್ನು ಕೋರುತ್ತಿರುವುದು ಸರಿಯಷ್ಟೇ.

ಈ ಸಂಬಂಧ ಆರ್ಥಿಕ ಇಲಾಖೆಯಿಂದ ಅನೇಕ ಪತ್ರ, ಆದೇಶ ಮತ್ತು ಸುತ್ತೋಲೆಗಳನ್ನು ಹೊರಡಿಸಲಾಗಿದೆ. ಇವುಗಳನ್ನು ಆರ್ಥಿಕ ಇಲಾಖೆಯ ವೆಬ್ ಸೈಟ್ ನಲ್ಲಿ ಅವಗಾಹಿಸಬಹುದಾಗಿದೆ.

ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 321 ವೆಚ್ಚ 6/2019 ದಿನಾಂಕ:29.5.2019, ಆಇ 477 ವೆಚ್ಚ 6/2019 ದಿನಾಂಕ:15.9.2019 ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರು ಎಲ್ಲಾ ಇಲಾಖೆಗಳ ಮುಖ್ಯಸ್ಥರಿಗೆ ಬರೆದಿರುವ ಪತ್ರವನ್ನೂ ಸಹ ವೆಬ್ ಸೈಟ್ ನಲ್ಲಿ ಪ್ರಚುರಪಡಿಸಿದೆ.

ಬಾಕಿ ವೇತನ ಮತ್ತು ಪ್ರಸಕ್ತ ಸಾಲಿನ ವೆಚ್ಚಕ್ಕಾಗಿ ದಿನಾಂಕ:29.5.2019ರ ಸುತ್ತೋಲೆಯ ನಿಗಧಿತ ಅನುಬಂಧದಲ್ಲಿ ಅಗತ್ಯ ಮಾಹಿತಿ/ಸ್ಪಷ್ಟೀಕರಣ/ಲೆಕ್ಕಾಚಾರ ಪಟ್ಟಿಗಳೊಂದಿಗೆ ದಿನಾಂಕ:31.7.2020ರೊಳಗೆ ಆರ್ಥಿಕ ಇಲಾಖೆಗೆ ಸಲ್ಲಿಸತಕ್ಕದ್ದು. ಒಂದು ವೇಳೆ ಕ್ಲುಪ್ತ ವೇಳೆಯೊಳಗೆ ಪ್ರಸ್ತಾವನೆ ಸ್ವೀಕೃತವಾಗದಿದ್ದಲ್ಲಿ ಯಾವುದೇ ಹೆಚ್ಚುವರಿ ಅನುದಾನದ ಅಗತ್ಯವಿಲ್ಲವೆಂದು ಪರಿಗಣಿಸಲಾಗುವುದು ಮತ್ತು ನಂತರ ಸ್ವೀಕೃತವಾಗುವ ಯಾವುದೇ ಹೆಚ್ಚುವರಿ ಅನುದಾನದ ಪ್ರಸ್ತಾವನೆಯನ್ನು ಪರಿಗಣಿಸಲಾಗುವುದಿಲ್ಲ.

ಯಾವುದೇ ವಿಳಂಬ ಹಾಗೂ ವೇತನ ಪಾವತಿಗೆ ಅನಾನುಕೂಲವಾದಲ್ಲಿ ಸಂಬಂಧಿಸಿದ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳೇ ಹೊಣೆಗಾರರಾಗಿರುತ್ತಾರೆ.

ತಮ್ಮ ನಂಬುಗೆಯ,

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)

ವಿಶೇಷಾಧಿಕಾರಿ (ಜಿ.ಪಂ.)ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ

ಆರ್ಥಿಕ ಇಲಾಖೆ